**ದಿನಾಂಕಃ 02-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ**

8. ಗಾಯಾಳು ಲಕ್ಷ್ಮಿ ಸುಟ್ಟ ಗಾಯಗಳಿಗೆ ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ಬಂದಿರಲಿಲ್ಲ ಹಾಗೂ ನಾನು ಗಾಯಾಳುವನ್ನು ಆಸ್ಪತ್ರೆಗೆ ದಾಖಲ್ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಹೊಳೇನರಸೀಪುರ ಪೊಲೀಸ್ ಠಾಣೆಯ ಎಎಸ್ಐ ರವರು ಆಸ್ಪತ್ರೆಗೆ ಭೇಟಿ ನೀಡಿಲ್ಲ ಹಾಗೂ ನನ್ನ ಮುಂದೆ ಗಾಯಾಳು ಲಕ್ಷ್ಮಿ ರವರ ಹೇಳಿಕೆಯನ್ನು ದಾಖಲ್ಮಾಡಿಕೊಂಡಿಲ್ಲ ಎಂದರೆ ಸರಿಯಲ್ಲ. ಗಾಯಾಳು ಲಕ್ಷ್ಮಿ ರವರು ಹೇಳಿಕೆ ನೀಡಿದ ಕಾಲದಲ್ಲಿ ಪ್ರಜ್ಞಾವಸ್ಥೆಯಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ಗಾಯಾಳು ಪ್ರಜ್ಞಾವಸ್ಥೆಯಲ್ಲಿ ಹೇಳಿಕೆ ನೀಡಿರುತ್ತಾರೆಂದು ಸುಳ್ಳು ಸಾಕ್ಷ್ಯ ನುಡಿದಿರುತ್ತೇನೆಂದರೆ ಸರಿಯಲ್ಲ. ಗಾಯಾಳು ಲಕ್ಷ್ಮಿ ನನ್ನ ಸಮಕ್ಷಮ ಆಕೆಯ ಯಾವುದೇ ಹೇಳಿಕೆಗೆ ಎಡಗೈ ಹೆಬ್ಬೆಟ್ಟಿನ ಗುರುತನ್ನು ಹಾಕಿರುವುದಿಲ್ಲ ಎಂದರೆ ಸರಿಯಲ್ಲ. ತಹಶೀಲ್ದಾರ್ ರವರು ನನ್ನ ಮುಂದೆ ಗಾಯಾಳು ಲಕ್ಷ್ಮಿ ರವರ ಯಾವುದೇ ಮರಣಪೂರ್ವ ಹೇಳಿಕೆಯನ್ನು ದಾಖಲ್ಮಾಡಿಲ್ಲ ಹಾಗೂ ಲಕ್ಷ್ಮಿ ರವರ ಯಾವುದೇ ಸಹಿಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಪ್ರಶ್ನಿತ ಮರಣಪೂರ್ವ ಹೇಳಿಕೆಯನ್ನು ನೀಡಿರುತ್ತಾರೆ ಎನ್ನಲಾದ ಕಾಲದಲ್ಲಿ ಲಕ್ಷ್ಮಿ ಪ್ರಜ್ಞಾವಸ್ಥೆಯಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ಪ್ರಶ್ನಿತ ಮರಣಪೂರ್ವ ಹೇಳಿಕೆಯನ್ನು ನೀಡುವ ಕಾಲದಲ್ಲಿ ಲಕ್ಷ್ಮಿ ಪ್ರಜ್ಞಾವಸ್ಥೆಯಲ್ಲಿದ್ದರು ಎಂದು ಸುಳ್ಳು ಸಾಕ್ಷ್ಯ ನುಡಿದಿರುತ್ತೇನೆಂದರೆ ಸರಿಯಲ್ಲ. ನಾನು ಲಕ್ಷ್ಮಿ ರವರ ಮರಣಪೂರ್ವ ಹೇಳಿಕೆಗೆ ಪೊಲೀಸರ ಹೇಳಿಕೆಯ ಮೇರೆಗೆ ಸಹಿ ಮಾಡಿ ಸುಳ್ಳು ಸಾಕ್ಷ್ಯ

ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಪೊಲೀಸರ ಹೇಳಿಕೆ ಮೇರೆಗೆ ಲಕ್ಷ್ಮಿ ಪ್ರಜ್ಞಾವಸ್ಥೆಯಲ್ಲಿದ್ದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತಾರೆ ಹಾಗೂ ಮರಣಪೂರ್ವ ಹೇಳಿಕೆ ನೀಡಿ ನನ್ನ ಸಮಕ್ಷಮ ಸಹಿ ಮಾಡಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿದಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ.

2ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್
ನ್ಯಾಯಾಧೀಶರು, ಹಾಸನ.